3) ಗುರುತಿಸಿರುವ 700ಕ್ಕೂ ಹೆಚ್ಚು ರೋಗಗಳ ಬಗ್ಗೆ ನಗದು ರಹಿತವಾಗಿ ಚಿಕಿತ್ಸೆ ನೀಡುವ ಸೌಲಭ್ಯಗಳು ಇರುತ್ತವೆ.

4) ಬಿಪಿಎಲ್ ಕುಟುಂಬದ ಸದಸ್ಯರು ಚಿಕಿತ್ಸೆಗಾಗಿ ಆಸ್ಪತ್ರೆಗೆ ಭೇಟಿ ನೀಡಿದಾಗ ಪ್ರತಿ ಸಾರಿ ಚಿಕಿತ್ಸೆ ಪಡೆದುದಕ್ಕೆ ಸಾರಿಗೆ ವೆಚ್ಚಕ್ಕಾಗಿ ರೂ. 100/- ರಂತೆ ವಾರ್ಷಿಕ ಗರಿಷ್ಠ ರೂ. 1000/- ಪಡೆಯುವ ಸೌಲಭ್ಯವಿದೆ.

5) ಆಯ್ಕೆ ಮಾಡಲಾದ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಿಂದ ಯೋಜನೆಯಡಿ ಸ್ಮಾರ್ಟ್‌ಕಾರ್ಡ್ ಪಡೆದ ಬಿಪಿಎಲ್ ಕುಟುಂಬದವರು ಒಳರೋಗಿಯಾಗಿ ಚಿಕಿತ್ಸೆ ಪಡೆಯಬಹುದಾಗಿದೆ.

ನೇತ್ರಾವತಿ ತಿರುವು ಯೋಜನೆ

14 (9) ಶ್ರೀ ಶಿವಲಿಂಗೇಗೌಡ ಕೆ. ಎಂ. (ಅರಸೀಕೆರೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೇತ್ರಾವತಿ ತಿರುವು ಯೋಜನೆಯಡಿ ಪರಮಶಿವಯ್ಯನವರ ವರದಿಯಲ್ಲಿ ಅರಸೀಕೆರೆ ಮತ್ತು ಇತರೆ ತಾಲ್ಲೂಕುಗಳಿಗೆ ನೀರಾವರಿ ಒದಗಿಸುವ ಯೋಜನಾ ಕಾರ್ಯ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು):

ಅ) ಶ್ರೀ ಜಿ.ಎಸ್. ಪರಮಶಿವಯ್ಯನವರು ಪ್ರಸ್ತಾಪಿಸಿರುವ ಯೋಜನೆಯಡಿಯಲ್ಲಿ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ಇನ್ನಿತರ ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿಡಿಸಲು ಯೋಜಿಸಲಾಗಿದೆ. ಈ ಯೋಜನೆಯ ಸಂಪೂರ್ಣ ವಿವರವಾದ ಯೋಜನಾ ವರದಿ ತಯಾರಿಸಲು ಕ್ರಮ ಜರುಗಿಸಲಾಗುತ್ತಿದ್ದು, ವಿವರವಾದ ಯೋಜನಾ ವರದಿ ತಯಾರಾದ ಮೇಲೆ ಯಾವ ತಾಲ್ಲೂಕು/ಪ್ರದೇಶಕ್ಕೆ ನೀರನ್ನು ಒದಗಿಸಲಾಗುವುದೆಂಬ ನಿಖರವಾದ ಮಾಹಿತಿ ಲಭ್ಯವಾಗುವುದು.

ಆ) ಶ್ರೀ ಜಿ.ಎಸ್. ಪರಮಶಿವಯ್ಯನವರ ಪ್ರಸ್ತಾವನೆಯಂತೆ ವಿವರವಾದ ಯೋಜನಾ ವರದಿಯ ತಯಾರಿಕೆಗಾಗಿ ಮೆ: ಎನ್.ಆರ್.ಎಸ್.ಸಿ. ಹೈದ್ರಾಬಾದ್‌ರವರಿಗೆ ದಿನಾಂಕ: 12-09-03ರಂದು ವಹಿಸಕೊಡಲಾಗಿತ್ತು. ಮೆ: ಎನ್.ಆರ್.ಎಸ್.ಸಿ., ಸಂಸ್ಥೆಯು ಮಾಲಾ ಕಾಲುವೆಯ ಸರ್ವೆ ಸಮೀಕ್ಷೆ ಮಾತ್ರ

ಕೈಗೊಂಡು ಸಾಫ್ಟ್ ಪ್ರತಿಯಲ್ಲಿ ಮಾಹಿತಿಯನ್ನು ನೀಡಲಾಗಿದೆ. ಉಳಿದಂತೆ, ಸೇವಾ ಕಾಲುವೆಯ ಸರ್ವೆ ಸಮೀಕ್ಷೆ ಮತ್ತು ವಿವರವಾಗ ಯೋಜನಾ ವರದಿಯ ತಯಾರಿಕೆ ಕಾರ್ಯವನ್ನು ಮೆ: ಎನ್.ಆರ್.ಎಸ್.ಸಿ., ಸಂಸ್ಥೆ ಮಾಡಲಾರದ ಕಾರಣ, ಈ ಕಾರ್ಯವನ್ನು ಪರಿಣಿತ ಸಂಸ್ಥೆಗಳಿಂದ ಮಾಡಿಸಲು ಟೆಂಡರ್ ಕರೆಯಲಾಗಿರುತ್ತದೆ. ಯೋಜನೆಯ ವಿವರವಾದ ವರದಿಯು ಲಭ್ಯವಾದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು.

ಸಣ್ಣ ಕೈಗಾರಿಕೆ

15 (29) ಶ್ರೀ ಸಂಪಂಗಿ. ಎನ್. (ಬಾಗೇಪಲ್ಲಿ): ಮಾನ್ಯ ಅರಣ್ಯ ಮತ್ತು ಸಣ್ಣ ಕ್ಯಾಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಪ್ರಾರಂಭಿಸಲು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ;

ಆ) ಸಣ್ಣ ಕೈಗಾರಿಕೆ ಸ್ಥಾಪಿಸಲು ಸರ್ಕಾರವು ಯಾವು ಕ್ರಮವನ್ನು ಕೈಗೊಳ್ಳಲಾಗಿದೆ ಹಾಗೂ ಎಲ್ಲೆಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದು (ತಾಲ್ಲೂಕುವಾರು ವಿವರ ಒದಗಿಸುವುದು)?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿವತಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೈಗಾರಿಕಾ ಪ್ರದೇಶಗಳ ಸ್ಥಾಪನೆಗಾಗಿ ಚಿಕ್ಕಬಳ್ಳಾಪುರ, ಬಾಗೇಪಲ್ಲಿ, ಚಿಂತಾಮಣಿ ಮತ್ತು ಗೌರಿಬಿದನೂರು ತಾಲ್ಲೂಕುಗಳಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ.

ಆ) ರಾಜ್ಯದ ವಿವಿಧ ಪ್ರದೇಶಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನಾಧರಿಸಿ, ಕೆ.ಐ.ಎ.ಡಿ.ಬಿ ಮೂಲಕ ಪ್ರದೇಶಗಳನ್ನು ಹಾಗೂ ಕೆ.ಎಸ್.ಎಸ್.ಯ.ಡಿ.ಸಿ. ಮೂಲಕ ಕೈಗಾರಿಕಾ ವಸಾಹತುಗಳನ್ನು ಅಭಿವೃದ್ಧಿ ಮಾಡುವ ಮೂಲಕ ಕೈಗಾರಿಕೋದ್ಯಮಿಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಅಗತ್ಯವಾದ ಕೈಗಾರಿಕಾ ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತದೆ.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ, ಕೆ.ಎಸ್.ಎಸ್.ಐ.ಡಿ.ಸಿ.ಯು ಚಿಂತಾಮಣಿ, ಗೌರಿಬಿದನೂರು, ಶಿಡ್ಲಘಟ್ಟ ಮತ್ತು ಮುದ್ದೇನಹಳ್ಳಿಯಲ್ಲಿ ಕೈಗಾರಿಕಾ ವಸಹಾತುಗಳನ್ನು ಸ್ಥಾಪಿಸಿದೆ. ಇದಲ್ಲದೇ ಗೌರಿಬಿದನೂರು ತಾಲ್ಲೂಕಿನ ಕುಡುಮಲಕುಂಟೆ, ಚಿಂತಾಮಣಿ ತಾಲ್ಲೂಕಿನ ಕೈವಾರದ ಮಾಸ್ತೇನ ಹಳ್ಳಿ,